ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

## "ಕನ್ನಡ ಕಾಯಕ ವರ್ಷ ೨೦೨೦-೨೧"

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು–560001.

ಸಂಖ್ಯೆ: ಕಾಶಿಇ/ಶೈವಿ/06/ಸುತ್ತೋಲೆ/2020–21 ದಿನಾಂಕಃ 16.02.2021

# ಸುತ್ತೋಲೆ

ವಿಷಯ: 2020ನೇ ಸಾಲಿಗೆ ಯುವ ಬರಹಗಾರರ ಚೊಚ್ಚಲ ಕೃತಿ ಪ್ರಕಟಿಸಲು ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ. ಬಗ್ಗೆ.

ಉಲ್ಲೇಖ: ಶ್ರೀ ಕೆ. ಬಿ. ಕಿರಣ್ ಸಿಂಗ್, ಆಡಳಿತಾಧಿಕಾರಿ, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು, ರವರ ಪತ್ರ ಸಂಖ್ಯೆ:ಕಪುಪ್ರಾ/53/2020/ಯು.ಬ.ಪ್ರೋ:2020–21 ದಿ:01.02.2021.

* * * * * *

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2020ನೇ ಸಾಲಿಗೆ 18 ವರ್ಷಗಳಿಂದ 40 ವರ್ಷಗಳ ವಯೋಮಿತಿಯೊಳಗಿನ ಯುವ ಬರಹಗಾರರು ಕನ್ನಡ ಸಾಹಿತ್ಯದಲ್ಲಿ ರಚಿಸಿರುವ ಕನಿಷ್ಟ 60 ಪುಟಗಳ ಚೊಚ್ಚಲ ಕೃತಿಗಳಿಗೆ (ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿ / ಸ್ನಾತಕೋತ್ತರ (ಪಿಹೆಚ್.ಡಿ) ಪದವಿಗೆ ಸಿದ್ಧಪಡಿಸಿದ ಸಂಶೋಧನಾ ಪ್ರಬಂಧಗಳನ್ನು ಹೊರತುಪಡಿಸಿ) ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಸಾಹಿತ್ಯ ಪ್ರಕಾರಗಳಿಗೆ ಪ್ರೋತ್ಸಾಹಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಸುತ್ತೋಲೆ ಹೊರಡಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಈ ಸಂಬಂಧ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಆಸಕ್ತ ವಿದ್ಯಾರ್ಥಿಗಳು (ಯುವ ಬರಹಗಾರರು) ಇದರ ಪ್ರಯೋಜನ ಪಡೆಯಲು ಅನುಕೂಲವಾಗುವಂತೆ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಿ ಅವರಿಗೆ ಪ್ರೋತ್ಸಾಹಿಸಬೇಕಾಗಿ ಸೂಚಿಸಲಾಗಿದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಸುತ್ತೋಲೆಯೊಂದಿಗೆ ಪ್ರಾಧಿಕಾರದ ಪ್ರಕಟಣೆಯ ಪ್ರತಿಯನ್ನು ಲಗತ್ತಿಸಲಾಗಿದೆ.

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ:**

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.

**ಪ್ರತಿಯನ್ನು:**

1. ಶ್ರೀ ಕೆ. ಬಿ. ಕಿರಣ್ ಸಿಂಗ್, ಆಡಳಿತಾಧಿಕಾರಿ, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, 1ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು–560 002.
2. ಕಛೇರಿ ಪ್ರತಿ.

# ಕನ್ನಡ ಪುಸ್ತಕ ಪ್ರಾಧಿಕಾರ

ಕನ್ನಡ ಭವನ, 1ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು – 560 002 / ದೂರವಾಣಿ : 080-22107704, 22484516

ವೆಬ್ ಸೈಟ್ : www.karnnadapustakarpradhikara.com | ಇ-ಮೇಲ್ : karnnadappradhikara@gmail.com


ಕಪುಪ್ರಾ:53:2020:ಯು.ಬ.ಪ್ರೋ.:2020-21

ದಿನಾಂಕ:01.02.2021

## ಪ್ರಕಟಣೆಯ ಕೃಪೆಗಾಗಿ

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2020ನೇ ಸಾಲಿನ ಯುವಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ. ಆಯ್ಕೆಯಾದ ಹಸ್ತಪ್ರತಿಗಳ ಪ್ರಕಟಣೆಗೆ ರೂ.15,000-00 ಗಳ ಪ್ರೋತ್ಸಾಹಧನ ನೀಡಲಾಗುವುದು. **ಅರ್ಜಿದಾರರು 18 ರಿಂದ 40 ವರ್ಷ ವಯೋಮಿತಿಯವರಾಗಿರಬೇಕು. ಸ್ವ-ವಿವರವುಳ್ಳ ಮನವಿಯೊಂದಿಗೆ ದೃಢೀಕೃತ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರದ ಪ್ರತಿ ಅಥವಾ ಅಧಿಕೃತವಾದ, ದೃಢೀಕರಿಸಲ್ಪಟ್ಟ ಜನ್ಮದಾಖಲಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು. ಅಲ್ಲದೆ ಪ್ರಸ್ತುತ ಸಲ್ಲಿಸಲ್ಪಡುತ್ತಿರುವ ಕೃತಿಯು ತಮ್ಮ ಚೊಚ್ಚಲ ಕೃತಿಯಾಗಿದ್ದು, ಎಲ್ಲಿಯೂ ಪ್ರಕಟವಾಗಿಲ್ಲವೆಂದು ಸ್ವಯಂ ದೃಢೀಕರಣ ಪತ್ರ ನೀಡಬೇಕು.**

ಆಯ್ಕೆಗಾಗಿ ಸಲ್ಲಿಸುವ ಹಸ್ತಪ್ರತಿಯು ಡಿ.ಟಿ.ಪಿ. ಮಾಡಿಸಿದಾಗ **1/8 ಡೆಮ್ಮಿ ಅಳತೆಯಲ್ಲಿ ಕನಿಷ್ಠ 60 ಪುಟಗಳಿರಬೇಕು.** ಅನುವಾದ, ಪಠ್ಯಪುಸ್ತಕ ಹಾಗೂ ಬೇರಾವುದೇ ಪದವಿ / ಸ್ನಾತಕೋತ್ತರ ಪದವಿ(PHD)ಗೆ ಸಿದ್ಧಪಡಿಸಿದ ಸಂಶೋಧನಾ ಪ್ರಬಂಧಗಳನ್ನು ಹೊರತುಪಡಿಸಿ, ಕಥೆ, ಕಾದಂಬರಿ, ಕವನ, ನಾಟಕ, ವಿಮರ್ಶಾ ಲೇಖನ, ಪ್ರಬಂಧ ಮುಂತಾದ ಕನ್ನಡ ಸಾಹಿತ್ಯ ಪ್ರಕಾರಗಳಿಗೆ ಸಂಬಂಧಿಸಿದಂತೆ ಹಸ್ತಪ್ರತಿ ಇರಬೇಕು. ಕೃತಿಯ ಪಠ್ಯದಲ್ಲಿ ಯಾವುದೇ ಧರ್ಮ, ದೇವರು, ಜಾತಿ, ಕೋಮು, ವೃತ್ತಿ, ಸಮುದಾಯ, ಭಾಷೆ, ಆಚರಣೆ, ಪದ್ಧತಿ, ಇತ್ಯಾದಿ ಸಂಗತಿಗಳಿಗೆ ಸಂಬಂಧಿಸಿದಂತೆ ಹಾಗೂ ರಾಷ್ಟ್ರೀಯ ನಾಯಕರುಗಳ ಕುರಿತಂತೆ ನೇರವಾಗಿಯೇ ಆಗಲಿ ಅಥವಾ ಪರೋಕ್ಷವಾಗಿಯೇ ಆಗಲಿ ಮನನೋಯಿಸುವಂತಹ ವಿಷಯವಾಗಲಿ ಇರಬಾರದು. ಅಲ್ಲದೆ ರಾಷ್ಟ್ರೀಯ ಭಾವೈಕ್ಯತೆಗೆ ದಕ್ಕೆ ತರುವಂತಹ ವಿಷಯ / ಸಂಗತಿಗಳು ಪ್ರಸ್ತಾಪವಾಗಿರಬಾರದು. ಪ್ರಾಧಿಕಾರಕ್ಕೆ ಸಲ್ಲಿಸಲ್ಪಡುವ ಅರ್ಜಿಗಳನ್ನು/ ಹಸ್ತಪ್ರತಿಗಳನ್ನು ಹಿಂದಿರುಗಿಸಲಾಗುವುದಿಲ್ಲ. ಆದ್ದರಿಂದ ತಮ್ಮ ಮೂಲ ಹಸ್ತಪ್ರತಿಯ ಒಂದು ಪ್ರತಿಯನ್ನು ತಮ್ಮ ಬಳಿಯೇ ಇಟ್ಟುಕೊಳ್ಳುವುದು.

**ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:20.02.2021ರೊಳಗೆ** ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು - 560 002 - ಅವರಿಗೆ ಕಳುಹಿಸಿಕೊಡಲು ಕೋರಿದೆ.

**ಹೆಚ್ಚಿನ ಮಾಹಿತಿಗಾಗಿ** : ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು -560002 – ವೆಬ್‌ಸೈಟ್ www.kannadapustakapradhikara.com, ದೂರವಾಣಿ ಸಂಖ್ಯೆ: 080-22484516 / 22107704 – ಇಲ್ಲಿ ಸಂಪರ್ಕಿಸಬಹುದಾಗಿದೆ.

ದಯವಿಟ್ಟು ಮೇಲಿನ ವಿಷಯವನ್ನು ತಮ್ಮ ಪತ್ರಿಕೆ/ಮಾಧ್ಯಮದಲ್ಲಿ ರಾಜ್ಯ ಮಟ್ಟದ ಸುದ್ದಿಯಾಗಿ ಪ್ರಕಟಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ವಿನಂತಿಸಲಾಗಿದೆ.

(ಕೆ.ಬಿ. ಕಿರಣ್ ಸಿಂಗ್)

ಆಡಳಿತಾಧಿಕಾರಿ

ಇವರಿಗೆ,

ನಿರ್ದೇಶಕರು / ಸಂಪಾದಕರು

ಬೆಂಗಳೂರು